## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನಕ್ಕಾಗಿ ವಿಶೇಷ ಅನುದಾನ ಬಿಡುಗಡೆ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/59/ಗ್ರಾನೀಸ(2)/ ಭಾಗ-I(1)/2012 ಮತ್ತು ಭಾಗ-I(2), ದಿ:30.03.2013.
2. ಮಾನ್ಯ ಸಚಿವರು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ, ದಿನಾಂಕ:25.02.2014 ರಂದು ನಡೆದ ಸಭೆಯ ನಿರ್ಣಯಗಳು.

---

**ಪೀಠಿಕೆ:**

**2013-14ರ ಸಾಲಿನಲ್ಲಿ** ರಾಜ್ಯ ವಲಯದಡಿ ತುರ್ತು ಗ್ರಾಮೀಣ ಕುಡಿಯುವ ನೀರು ಪೂರೈಕೆ ಯೋಜನೆ / ಕಾಮಗಾರಿಗಳ ಅನುಷ್ಠಾನ ಸಲುವಾಗಿ ಮೇಲೆ ಓದಲಾದ (2)ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವಂತಹ ಕಡೆಗಳಲ್ಲಿ **NRDWP** - ಕ್ರಿಯಾಯೋಜನೆಗಳಡಿ ಹಾಗೂ ಇನ್ನಿತರ ಯಾವುದೇ ಯೋಜನೆಗಳಡಿ ಅವಶ್ಯ ಕಾಮಗಾರಿಗಳು ಸೇರಿಲ್ಲದಿರುವಂತಹ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಸಲುವಾಗಿ **2013-14ರ** ಸಾಲಿನಲ್ಲಿ ರಾಜ್ಯಮಟ್ಟದಲ್ಲಿ ರಾಜ್ಯ ವಲಯದಡಿ ಲಭ್ಯವಿರುವ ಅನುದಾನದ ವತಿಯಿಂದ **ತಲಾ ರೂ.300.00ಲಕ್ಷದಂತೆ ಎರಡು** ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ತುರ್ತು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು / ಪೂರ್ಣಗೊಳಿಸಲು ಹೆಚ್ಚುವರಿ ಅನುದಾನ ಬಿಡುಗಡೆ ಮಾಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/95/ಗ್ರಾನೀಸ(2)/2013 ಬೆಂಗಳೂರು, ದಿನಾಂಕ: 04.03.2014**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನ ಸಲುವಾಗಿ ರಾಜ್ಯ ವಲಯದಡಿ **ರೂ.600.00ಲಕ್ಷಗಳ (ಆರು ನೂರು ಲಕ್ಷ ರೂಪಾಯಿಗಳು ಮಾತ್ರ) ಹೆಚ್ಚುವರಿ ಅನುದಾನವನ್ನು** ಈ ಕೆಳಕಂಡ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ. ಸಂ. | ಜಿಲ್ಲೆ | ಬಿಡುಗಡೆ ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2 | 3 |
| 1 | ಚಿಕ್ಕಬಳ್ಳಾಪುರ | 300.00 |
| 2 | ಕೋಲಾರ | 300.00 |
| | ಒಟ್ಟು: | **600.00** |

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು **RTGS** ಮುಖೇನ ಈಗಾಗಲೇ ಗೊತ್ತುಪಡಿಸಿರುವ **SWSM** ಬ್ಯಾಂಕ್ ಮೂಲ **ಖಾತೆ ಸಂಖ್ಯೆ: 04462010091577** ಮುಖೇನ ವಿನಿಯೋಗಿಸತಕ್ಕದ್ದು. ಈ ಆದೇಶದಲ್ಲಿ ಆಯಾ ಜಿಲ್ಲಾವಾರು ಬಿಡುಗಡೆ ಮಾಡಿರುವ ಅನುದಾನದ ಮಿತಿಯೊಳಗೆ ಬಿಲ್‌ಗಳನ್ನು ಮಾನ್ಯ ಮಾಡಲು ಸಿಂಡಿಕೇಟ್ ಬ್ಯಾಂಕ್ ರಾಜ್ಯ ಮಟ್ಟದಲ್ಲಿ ಕ್ರಮವಹಿಸತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು **IMIS**ನಲ್ಲಿ ದಾಖಲಿಸತಕ್ಕದ್ದು.

....2

3. ಮೇಲ್ಕಂಡ ಪರಿಕ್ರಮಕ್ಕನುಗುಣವಾಗಿ **NRDWP**ಯಡಿ ರಾಜ್ಯವಲಯದ **MNP**ಯಡಿ **ರೂ.100.00ಕೋಟಿಗಳನ್ನು** ರಾಜ್ಯದ ಪಾಲಾಗಿ ನಿರ್ದೇಶಕರು **SWSM**, ಬೆಂಗಳೂರುರವರಿಗೆ ಈಗಾಗಲೇ ಮೇಲೆ ಓದಲಾದ (1)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ. ಅಂತೆಯೇ, ಈಗ ರಾಜ್ಯವಲಯದ **MNP(C&Q)** ಘಟಕದಡಿ ಬಿಡುಗಡೆ ಮಾಡಿರುವ **ರೂ.6.00ಕೋಟಿಗಳನ್ನು 2013-14ನೇ** ಸಾಲಿನ **ಲೆಕ್ಕ ಶೀರ್ಷಿಕೆ 4215-01-102-9-01-059 (2013-14 ಯೋಜನೆ)**ರಡಿ ಗಣನೆಗೆ ತೆಗೆದುಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಪ್ರಸ್ತುತ ತೀವ್ರ ಸಮಸ್ಯೆಗೊಳಗಾಗಿರುವ ಗ್ರಾಮೀಣ ಜನವಸತಿಗಳಲ್ಲಿ ಸ್ಥಳೀಯ ಅಗತ್ಯತೆಯನುಸಾರ ಜಿಲ್ಲಾಧಿಕಾರಿಗಳೊಂದಿಗೆ ಸಮಾಲೋಚಿಸಿ **SDRF/NDRF**ನಡಿ ತೆಗೆದುಕೊಳ್ಳಲು ಅವಕಾಶವಿಲ್ಲದಂತಹ ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಮಾತ್ರ ವಿನಿಯೋಗಿಸಬೇಕು. ಈ ಅನುದಾನ ವಿನಿಯೋಗ ಮಾಡುವಾಗ ಶಾಸಕರ ಅಧ್ಯಕ್ಷತೆಯಲ್ಲಿರುವ ಟಾಸ್ಕ್ ಫೋರ್ಸ್ ಸಮಿತಿ ಶಿಫಾರಸ್ಸುಗಳನ್ನು ಪರಿಗಣಿಸಬೇಕು. ತತ್ಸಂಬಂಧದ ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರಗಳನ್ನು **CE/PRED** ಮತ್ತು ಸರ್ಕಾರಕ್ಕೆ ವರದಿ ಮಾಡಬೇಕು. ಹಾಗೂ ಸದರಿ ಮಾಹಿತಿಯನ್ನು **IMIS**ನಲ್ಲಿ ಪ್ರತಿಬಿಂಬಿಸಬೇಕು. ಈ ಕಾಮಗಾರಿಗಳು ಯಾವುದೇ ಕಾರಣಕ್ಕೂ ಇತರೆ ಸಾಮಾನ್ಯ ಕುಡಿಯುವ ನೀರಿನ ಯೋಜನೆಗಳಡಿ ಪುನರಾವರ್ತನೆಯಾಗಕೂಡದು. ಈ ರೀತಿ ಅನುಷ್ಠಾನಗೊಳಿಸಿದ ಕಾಮಗಾರಿಗಳ ಸಂಪೂರ್ಣ ವಿವರಗಳನ್ನು ಆಸ್ತಿದಾಯಿತ್ವ ದಾಖಲೆಗಾಗಿ ಆಯಾ ಗ್ರಾಮ ಪಂಚಾಯತಿಗಳಿಗೆ ನೀಡಬೇಕು. ಸಂಬಂಧಪಟ್ಟ **PRED** ವೃತ್ತ ಅಧೀಕ್ಷಕ ಅಭಿಯಂತರರು ಇಂತಹ ಕಾಮಗಾರಿಗಳು ಸಾರ್ವಜನಿಕ ಹಿತದೃಷ್ಟಿಯಿಂದ ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನವಾಗಿರುವ ಕುರಿತು ತಪಾಸಣೆ ಮಾಡಿ ದೃಢೀಕರಿಸಬೇಕು.

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ **ಆದೇಶ ಸಂಖ್ಯೆ: ಗ್ರಾಅಪ/58/ಎಎಫ್ಎನ್/2012, ದಿನಾಂಕ:01.04.2013ರನ್ವಯ** ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇಮೇಲ್:rk3452000@gmail.com**
**ಫೋನ್:22032806, ಫ್ಯಾಕ್ಸ್:22203175**

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖ್ಯಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ~~ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.~~
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.

..3

9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು–09.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್ **ಚಿಕ್ಕಬಳ್ಳಾಪುರ, ಕೋಲಾರ.**
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ್, **ಚಿಕ್ಕಬಳ್ಳಾಪುರ, ಕೋಲಾರ.**
14. ಅಧೀಕ್ಷಕ ಅಭಿಯಂತರುಗಳು, ಬೆಂಗಳೂರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ.
15. ಕಾರ್ಯಪಾಲಕ ಇಂಜಿನಿಯರ್‌ಗಳು. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, **ಚಿಕ್ಕಬಳ್ಳಾಪುರ, ಕೋಲಾರ.**
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್ **PRED** ಕಛೇರಿ, ಬೆಂಗಳೂರು.
17. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
18. ನಿರ್ದೇಶಕರು, **KRWSSA** ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು, / ಅಪರ ನಿರ್ದೇಶಕರು, ಆರ್ಥಿಕ – **KRWSSA , RDPR** ಇಲಾಖೆ ಇವರುಗಳ ಆಪ್ತ ಸಹಾಯಕರು.
19. **ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.**
20. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
21. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
22. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
22. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
23. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.